ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎಂಟನೇ ಅಧಿವೇಶನ)
(ಮುಂದುವರೆದ ಉಪವೇಶನಗಳು)

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 20ನೇ ನವೆಂಬರ್, 2015
(ಸಮಯ: ಬೆಳಿಗ್ಗೆ 10.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೈದನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೈದನೇ ಪಟ್ಟಿ

2. ಪ್ರಸ್ತಾವ

ಶ್ರೀ ಜಗದೀಶ್ ಶೆಟ್ಟರ್, ಮಾನ್ಯ ವಿರೋಧ ಪಕ್ಷದ ನಾಯಕರು ಮತ್ತು ಶ್ರೀ ವೈ.ಎಸ್.ವಿ. ದತ್ತಾ, ಜನತಾದಳ (ಎಸ್) ಶಾಸಕಾಂಗ ಪಕ್ಷದ ಉಪ ನಾಯಕರು ಇವರುಗಳು – 1984ನೇ ಕರ್ನಾಟಕ ಲೋಕಾಯುಕ್ತ ಅಧಿನಿಯಮ (ಕರ್ನಾಟಕ ಲೋಕಾಯುಕ್ತ ತಿದ್ದುಪಡಿ ಅಧಿನಿಯಮ 2015)ರ ನಿಯಮ 6ರ ಅವಕಾಶಗಳಡಿ ಕರ್ನಾಟಕ ಲೋಕಾಯುಕ್ತರನ್ನು ಪದಚ್ಯುತಿಗೊಳಿಸಬೇಕೆಂದು ಪ್ರಸ್ತಾವ ಮಂಡಿಸುವುದು.

3. ಶಾಸನ ರಚನೆ

ವಿಧೇಯಕವನ್ನು ಮಂಡಿಸುವುದು

ಕರ್ನಾಟಕ ನಗರಪಾಲಿಕೆಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ)ವಿಧೇಯಕ, 2015
ಶ್ರೀ ವಿನಯಕುಮಾರ ಸೊರಕೆ (ನಗರಾಭಿವೃದ್ಧಿ ಸಚಿವರು) ಅವರು:-

ಅ) 2015ನೇ ಸಾಲಿನ ಕರ್ನಾಟಕ ನಗರಪಾಲಿಕೆಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಆ)ಹಾಗೂ ವಿಧೇಯಕವನ್ನು ಮಂಡಿಸುವುದು.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಗೋವಿಂದ ಎಂ. ಕಾರಜೋಳ, ಹೆಚ್.ಡಿ. ಕುಮಾರಸ್ವಾಮಿ, ವೈ.ಎಸ್.ವಿ. ದತ್ತಾ, ಬಿ.ಆರ್. ಪಾಟೀಲ್, ಜಿ. ರಾಮಕೃಷ್ಣ ಮತ್ತು ಮಾಲಿಕಯ್ಯ ವಿ. ಗುತ್ತೇದಾರ್ ಹಾಗೂ ಇತರರು – ರಾಜ್ಯದಲ್ಲಿನ ಬರಗಾಲ, ರೈತರ ಸಂಕಷ್ಟಗಳ ಬಗ್ಗೆ ಮುಂದುವರೆದ ಚರ್ಚೆ ನಡೆಸುವುದು.

ಮು.ತಿ.ನೋ

2. ಶ್ರೀಯುತರುಗಳಾದ ಬಿ.ಎನ್. ವಿಜಯಕುಮಾರ್, ಎಸ್. ಸುರೇಶ್‌ಕುಮಾರ್, ಎಸ್. ರಘು ಹಾಗೂ ಎಲ್.ಎ. ರವಿಸುಬ್ರಮಣ್ಯ ಅವರುಗಳು - ಬೆಂಗಳೂರು ನಗರದಲ್ಲಿ ಕಸದ ಸಮಸ್ಯೆ ಹೆಚ್ಚಾಗಿದ್ದು, ಕಸ ವಿಲೇವಾರಿಯಾಗದೆ ರಸ್ತೆ, ಪಾರ್ಕ್ ಮತ್ತು ಖಾಲಿ ನಿವೇಶನಗಳಲ್ಲಿ ಕಸವನ್ನು ಅವೈಜ್ಞಾನಿಕವಾಗಿ ವಿಂಗಡಣೆ ಮಾಡಲಾಗುತ್ತಿರುವುದರಿಂದ ಸಾರ್ವಜನಿಕರಿಗೆ ಅನಗತ್ಯ ಕಿರಿಕಿರಿ ಉಂಟಾಗಿ ಆರೋಗ್ಯಕ್ಕೆ ಹಾನಿಯುಂಟಾಗುತ್ತಿದ್ದು, ಕಸದ ಸಮಸ್ಯೆಯನ್ನು ವೈಜ್ಞಾನಿಕವಾಗಿ ನಿಭಾಯಿಸುವ ಬಗ್ಗೆ ಚರ್ಚಿಸುವುದು.

3. ಶ್ರೀಯುತರುಗಳಾದ ಕೆ.ಎಂ. ಶಿವಲಿಂಗೇಗೌಡ, ಹೆಚ್.ಡಿ. ರೇವಣ್ಣ, ವೈ.ಎಸ್.ವಿ. ದತ್ತಾ ಹಾಗೂ ಇತರರು - ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕು ವ್ಯಾಪ್ತಿಯಲ್ಲಿ "ಬಹುಗ್ರಾಮ" ಕುಡಿಯುವ ನೀರಿನ ಯೋಜನೆ ಕಾಮಗಾರಿಯನ್ನು ಪೂರ್ಣಗೊಳಿಸುವ ಬಗ್ಗೆ ಚರ್ಚಿಸುವುದು.

4. ಶ್ರೀಯುತರುಗಳಾದ ಎನ್.ಹೆಚ್. ಕೋನರಡ್ಡಿ, ಎ.ಎಸ್. ಪಾಟೀಲ(ನಡಹಳ್ಳಿ), ವೈ.ಎಸ್.ವಿ. ದತ್ತಾ, ಕೆ.ಎಂ. ಶಿವಲಿಂಗೇಗೌಡ, ಕೆ.ಆರ್. ರಮೇಶ್‌ಕುಮಾರ್ ಹಾಗೂ ಇತರರು - ಮಹದಾಯಿ ಉಪಯೋಜನೆಯಿಂದ ಕಳಸಾ-ಬಂಡೂರಿ ಯೋಜನೆಯನ್ನು ಕೂಡಲೇ ಜಾರಿಗೊಳಿಸುವ ಬಗ್ಗೆ ಚರ್ಚಿಸುವುದು.

೫. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಮಾನಪ್ಪ ಡಿ.ವಜ್ಜಲ್ ಅವರು-ರಾಯಚೂರು ಜಿಲ್ಲೆಯ ಲಿಂಗಸುಗೂರು ಪಟ್ಟಣದ ದೊಡ್ಡ ಕೆರೆಯನ್ನು 'ರಾಷ್ಟ್ರೀಯ ಕೆರೆ ಸಂರಕ್ಷಣಾ ಯೋಜನೆ' ಅಡಿ ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

2. ಶ್ರೀಯುತರುಗಳಾದ ಹೆಚ್.ಸಿ. ಬಾಲಕೃಷ್ಣ, ಎಂ.ಟಿ. ಕೃಷ್ಣಪ್ಪ , ಬಿ.ಬಿ. ನಿಂಗಯ್ಯ, ಪಿಳ್ಳ ಮುನಿಶಾಮಪ್ಪ ಹಾಗೂ ಡಾ: ಕೆ. ಶ್ರೀನಿವಾಸಮೂರ್ತಿ ಅವರುಗಳು – ಕರ್ನಾಟಕ ಹಾಲು ಮಹಾ ಮಂಡಳಿ ವತಿಯಿಂದ ರಾಮನಗರ ಜಿಲ್ಲೆ ಚನ್ನಪಟ್ಟಣ ತಾಲ್ಲೂಕಿನ ಕನ್ನಮಂಗಲ ಗ್ರಾಮದಲ್ಲಿ ಹಾಲು ಸಂಸ್ಕರಣಾ ಘಟಕ ಮತ್ತು ಹಾಲಿನ ಪುಡಿ ಘಟಕದ ನಿರ್ಮಾಣದ ತಾಂತ್ರಿಕ ಉಪಕರಣಗಳ ಖರೀದಿ ಸಂಬಂಧದಲ್ಲಿನ ಟೆಂಡರ್ ಪ್ರಕ್ರಿಯೆಯಲ್ಲಿ ಆಡಳಿತ ಮಂಡಳಿಯ ಅಧ್ಯಕ್ಷರು ಹಾಗೂ ಸದಸ್ಯರುಗಳು ಕಾನೂನು ಬಾಹಿರವಾಗಿ ಕೆ.ಟಿ.ಟಿ.ಪಿ. ಕಾಯ್ದೆಯನ್ನು ಉಲ್ಲಂಘಿಸಿ ನಷ್ಟ ಉಂಟು ಮಾಡಿರುವ ಬಗ್ಗೆ ತನಿಖೆ ನಡೆಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

3. ಶ್ರೀ ಯು.ಬಿ. ಬಣಕಾರ್ ಅವರು – ಹಿರೇಕೆರೂರ ತಾಲ್ಲೂಕು ಕೋಡ ಗ್ರಾಮದಲ್ಲಿ ಕಲಾ ಮತ್ತು ವಾಣಿಜ್ಯ ವಿಭಾಗದ ಪ್ರಥಮ ದರ್ಜೆ ಕಾಲೇಜನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

4. ಶ್ರೀ ಜಿ.ಹೆಚ್. ಶ್ರೀನಿವಾಸ ಅವರು – ರಾಜ್ಯಾದ್ಯಂತ ನಗರಗಳಲ್ಲಿ ಫ್ಲೆಕ್ಸ್ ಬ್ಯಾನರ್‌ಗಳು, ಹೋರ್ಡಿಂಗ್ಸ್‌ಗಳು ಹೆಚ್ಚುತ್ತಿರುವುದರಿಂದ ನಗರಗಳ ಸೌಂದರ್ಯ ಹಾಗೂ ಪರಿಸರ ಹಾಳಾಗುತ್ತಿರುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

5. ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು – ರಾಷ್ಟ್ರೀಯ ಹೆದ್ದಾರಿ-234ರ ಅರಸೀಕೆರೆ ಭಾಗದ ಬಾಣಾವರದಿಂದ ಹುಳಿಯಾರು ರಸ್ತೆ ಕಾಮಗಾರಿಯನ್ನು ತುರ್ತಾಗಿ ಪೂರ್ಣಗೊಳಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

6. ಶ್ರೀಮತಿ ವೈ. ರಾಮಕ್ಕ ಅವರು – ಕೋಲಾರ ಜಿಲ್ಲೆ ಕೆ.ಜಿ.ಎಫ್. ನಗರದ ಸೂರಜ್ ಮಾಲ್ ವೃತ್ತದಿಂದ ಅಶೋಕನಗರ ರಸ್ತೆ ಅಗಲೀಕರಣ ಕಾಮಗಾರಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದರೂ ಕಾಮಗಾರಿಯನ್ನು ಪ್ರಾರಂಭ ಮಾಡದಿರುವ ಬಗ್ಗೆ ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

7. ಶ್ರೀ ಹೆಚ್.ಸಿ. ಬಾಲಕೃಷ್ಣ ಅವರು – 2014-15, 2015-16ನೇ ಸಾಲಿನ ಗ್ರಾಮೀಣ ಕುಡಿಯುವ ನೀರು (ಎನ್.ಆರ್.ಡಿ.ಡಬ್ಲ್ಯು.ಪಿ) ಯೋಜನೆಗಳಿಗೆ ಬಾಕಿ ಇರುವ ಬಿಲ್ಲುಗಳ ಬಿಡುಗಡೆ ಹಾಗೂ ಯೋಜನೆಯ ಅಂದಾಜು ಪಟ್ಟಿಯು ಅನುಮೋದನೆಯಾಗದಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

8. ಶ್ರೀ ಹೆಚ್.ಪಿ. ರಾಜೇಶ್ ಅವರು – ದಾವಣಗೆರೆ ಜಿಲ್ಲೆ ಜಗಳೂರು ತಾಲ್ಲೂಕು ಸಂತೆ ಮುದ್ದಾಪುರ ಹಾಗೂ ಇತರೆ 156 ಹಳ್ಳಿಗಳ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ವಿಳಂಬವಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

9. ಶ್ರೀ ಎನ್.ಹೆಚ್. ಕೋನರಡ್ಡಿ ಅವರು – ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಚಾಲಕ-ಕಂ-ನಿರ್ವಾಹಕ ಹುದ್ದೆಗೆ ನೇಮಕವಾಗಿರುವ ಕೆಲವು ಅಭ್ಯರ್ಥಿಗಳಿಗೆ ಸ್ಥಳ ನಿಯುಕ್ತಿಗೊಳಿಸುವ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.

10. ಶ್ರೀ ಕೆ.ಎಸ್. ಪುಟ್ಟಣಯ್ಯ ಅವರು – ಬಿ.ಪಿ.ಎಲ್. ಕಾರ್ಡ್‌ದಾರರು ಹಾವು ಕಡಿದು ಸಾವನ್ನಪ್ಪಿದಾಗ ಶವ ಸಂಸ್ಕಾರಕ್ಕೆ ಅವರ ಕುಟುಂಬದವರಿಗೆ ಸರ್ಕಾರದ ಘೋಷಣೆಯಂತೆ ನೀಡಲಾಗುವ ಪರಿಹಾರಧನವನ್ನು ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

11. ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು – ಹಾಸನ ಜಿಲ್ಲೆ ಸಕಲೇಶಪುರ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಬೆಂಗಳೂರು-ಜಾಲ್ಸೂರು ರಾಜ್ಯ ಹೆದ್ದಾರಿ 85ರಲ್ಲಿ ಎಸ್‌ಹೆಚ್‌ಡಿಪಿ 2ನೇ ಹಂತದಲ್ಲಿ ಕಾಂಕ್ರೀಟ್ ರಸ್ತೆ ಅಭಿವೃದ್ಧಿಗೆ ಅನುದಾನ ಬಿಡುಗಡೆಯಾಗಿದ್ದರೂ ಸಹ ಅರಣ್ಯ ಇಲಾಖೆಯವರು ಅಡ್ಡಿಪಡಿಸುತ್ತಿರುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

12. ಶ್ರೀ ಸಿ.ಟಿ. ರವಿ ಅವರು – ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳ ನಿಲಯ ಪಾಲಕರುಗಳಿಗೆ ಹಾಗೂ ವಿದ್ಯಾರ್ಥಿಗಳಿಗೆ ಸರ್ಕಾರದ ಸೌಲಭ್ಯಗಳು ದೊರೆಯದಿರುವುದು, ವಿದ್ಯಾರ್ಥಿಗಳ ಭೋಜನ ದರ ಹೆಚ್ಚಿಸದಿರುವುದು, ಅನುದಾನದ ಕೊರತೆ ಇತ್ಯಾದಿ ಬೇಡಿಕೆಗಳ ಬಗ್ಗೆ ನಿಲಯಪಾಲಕರು ನಡೆಸುತ್ತಿರುವ ಪ್ರತಿಭಟನೆ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

13. ಶ್ರೀ ಗುರು ಪಾಟೀಲ (ಶಿರವಾಳ) ಅವರು – ಕೃಷ್ಣಾ ಮೇಲ್ದಂಡೆ ಯೋಜನೆಯ ನಾರಾಯಣ ಎಡ ದಂಡೆ ನಾಲೆಗೆ 14 ದಿನಗಳು ನೀರು ಹರಿಸಲು ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

ಎಸ್.ವೈ. ಕುಳಗೇರಿ
ಕಾರ್ಯದರ್ಶಿ(ಪ್ರ)

NR